ಆ) ಹೌದಾದಲ್ಲಿ, ಆ ಕುರಿತು ವಿವರಗಳೇನು?

ಇ) ಈ ಕುರಿತು ಅಧ್ಯಯನ ನಡೆಸಲು ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಸೈನ್ಸ್ ಮ್ಯಾನೇಜ್‌ಮೆಂಟ್‌ಗೆ ವಹಿಸಿದ್ದು, ಅದು ತನ್ನ ವರದಿಯನ್ನು ನೀಡಿದೆಯೇ? ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಈ) ಪರಿಶಿಷ್ಟ ಜಾತಿ ಮತ್ತು ವರ್ಗಗಳ ಜನರನ್ನು ಆರ್ಥಿಕವಾಗಿ ಸಬಲಗೊಳಿಸಲು ಸಾಲ ಯೋಜನೆಯಲ್ಲಿ ಮಾರ್ಪಾಡು ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ?

ಉ) ಹಾಗಿದ್ದಲ್ಲಿ, ಈ ಬಗ್ಗೆ ಕಾರ್ಯಕ್ರಮಗಳೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಹೌದು ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಅಧ್ಯಯನ ನಡೆಸಿ ತನ್ನ ವರದಿಯನ್ನು ನೀಡಿದೆ ವರದಿಯಲ್ಲಿ ಮಾಡಲಾಗಿರುವ ಶಿಫಾರಸ್ಸುಗಳ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳು ಪರಿಶೀಲನಾ ಹಂತದಲ್ಲಿದೆ

ಈ) ಸ್ವಯಂ ಉದ್ಯೋಗ ಯೋಜನೆಯಲ್ಲಿ ಸಣ್ಣಪುಟ್ಟ ವ್ಯಾಪಾರಸ್ಥರಿಗೆ ಆರ್ಥಿಕ ಸಹಾಯವನ್ನು ಒದಗಿಸಲು ಮೈಕ್ರೋ ಕ್ರೆಡಿಟ್ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆ ಪರಿಶೀಲನಾ ಹಂತದಲ್ಲಿದೆ

ಯೋಜನೆಯ ರೂಪುರೇಷೆಗಳು ಅನುಮೋದನೆಯಾದ ನಂತರ ನಿಗಮವು ಕಾರ್ಯಕ್ರಮಗಳನ್ನು ಜಾರಿಗೆ ತರುತ್ತದೆ

598 (704) ಶ್ರೀ ಕೃಷ್ಣ ಪಾಲೇಮಾರ್ ಜೆ (ಸುರತ್ಕಲ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ವರ್ಗಗಳ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಸರ್ಕಾರ ಆರ್ಥಿಕ ಸಾಲಿನಲ್ಲಿ ಮಂಜೂರು ಮಾಡಿದ ಹಣದ ಮೊತ್ತ ಎಷ್ಟು? ಅದು ಇಲಾಖಾ ಬೇಡಿಕೆಗೆ ಅನುಗುಣವಾಗಿದೆಯೇ?

ಆ) ಹಿಂದುಳಿದ ವರ್ಗಗಳ ಜನಸಂಖ್ಯೆಯ ಆಧಾರದ ಮೇಲೆ ಯೋಜನೆಗಳನ್ನು ರೂಪಿಸುವ ಅಗತ್ಯತೆಯನ್ನು ಸರ್ಕಾರ ಮನಗಂಡಿದೆಯೇ?

ಇ) ಹೌದಾದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಈ) ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಸರ್ಕಾರದ ನೂತನ ಕ್ರಿಯಾಯೋಜನೆಗಳು ಯಾವುವು? ಅವುಗಳ ಅನುಷ್ಠಾನದ ವಿವರಗಳೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ಹಿಂದುಳಿದ ವರ್ಗಗಳ ಕಲ್ಯಾಣ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯಕ್ರಮಗಳಿಗೆ ಪ್ರಸಕ್ತ 2006–07ನೇ ಸಾಲಿಗೆ ಒಟ್ಟು ರೂ 20449 26 ಲಕ್ಷಗಳನ್ನು ಒದಗಿಸಲಾಗಿರುತ್ತದೆ ಈ ಮೊತ್ತ ಇಲಾಖೆಯ ಬೇಡಿಕೆಗಿಂತ ಕಡಿಮೆ ಇರುತ್ತದೆ

ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ

2006–07ನೇ ಸಾಲಿನ ಆಯವ್ಯಯದಲ್ಲಿ ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಒಟ್ಟು ರೂ 49 00 ಕೋಟಿಗಳನ್ನು ಒದಗಿಸಿದೆ ಹಾಗೂ ಜನವರಿ 2007ರವರೆಗೆ ರೂ 36 75 ಕೋಟಿಗಳನ್ನು ಬಿಡುಗಡೆ ಮಾಡಿದೆ

2005–06ನೇ ಸಾಲಿಗೆ ರೂ 26 95 ಕೋಟಿಗಳನ್ನು ಸರ್ಕಾರವು ಬಿಡುಗಡೆ ಮಾಡಿತ್ತು ಇದಕ್ಕೆ ಹೋಲಿಸಿದಾಗ, 2006–07ನೇ ಸಾಲಿಗೆ ರೂ 22 05 ಕೋಟಿಗಳ ಹೆಚ್ಚಿನ ಹಣವನ್ನು ನೀಡಿದ್ದು, ಇದು ಶೇ 91 82ರಷ್ಟು ಹೆಚ್ಚಿನದಾಗಿರುತ್ತದೆ

ಆ) ಹೌದು

ಹಿಂದುಳಿದ ವರ್ಗಗಳ ಜನಸಂಖ್ಯೆ ಆಧಾರದ ಮೇಲೆ ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡಲಾಗುತ್ತಿದೆ

ಇ) ಹಿಂದುಳಿದ ವರ್ಗಗಳ ಜನಸಂಖ್ಯೆಯ ಆಧಾರದ ಮೇಲೆ ಯೋಜನೆಗಳನ್ನು ರೂಪಿಸುವ ಅಗತ್ಯದ ಹಿನ್ನೆಲೆಯಲ್ಲಿ ಜನಸಂಖ್ಯಾ ಸಮೀಕ್ಷಾ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ ಪ್ರಸಕ್ತ ಆಯವ್ಯಯದಲ್ಲಿ ನಿಗಮಕ್ಕೆ ಒದಗಿಸುವ ಹಣವನ್ನು ಅವಲಂಬಿಸಿ 2001ರ ಜನಗಣತಿಯ ಜಿಲ್ಲಾವಾರು ಜನಸಂಖ್ಯೆ ಆಧಾರದ ಮೇಲೆ ಆಯಾ ಜಿಲ್ಲೆಯ ಗುರಿಯನ್ನು ನಿಗದಿಪಡಿಸಲಾಗುತ್ತದೆ

ಈ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಹೊಸ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿದೆ

1 ನರ್ಸಿಂಗ್ ತರಬೇತಿ

2 ಗಗನಸಖಿ ತರಬೇತಿ

3 ವಿದೇಶಿ ವ್ಯಾಸಂಗ

4 ಪೈಲೆಟ್ ತರಬೇತಿ

ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ

2006–07ನೇ ಸಾಲಿನಿಂದ (1) ಅತೀ ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರಿಗೆ ವಿಶೇಷ ಯೋಜನೆ, (2) ಅಸಂಘಟಿತ ವಲಯದಲ್ಲಿ ಬರುವ ಭೂ ರಹಿತ ಕೃಷಿ ಕೂಲಿ/ಕಾರ್ಮಿಕರಿಗೆ ವಿಶೇಷ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಈ ಯೋಜನೆಗಳಲ್ಲಿ ವಿವಿಧ ಆದಾಯ ತರುವಂತಹ ಯೋಜನೆಗಳನ್ನು ಕೈಗೊಳ್ಳಲು ರೂ 5000/– ಸಬ್ಸಿಡಿ ಹಾಗೂ ಶೇ 4ರ ಬಡ್ಡಿ ದರದಲ್ಲಿ ರೂ 10,000/–ಗಳ ಸಾಲವನ್ನು ಕೊಡಲಾಗುತ್ತದೆ

599 (531) ಶ್ರೀ ಕೃಷ್ಣ ಬೈರೇಗೌಡ ಸಿ ಬಿ (ವೇಮಗಲ್) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೆದ್ದಾರಿಗಳ ಬದಿಗಳಲ್ಲಿ ಸುಸಜ್ಜಿತವಾದ ಆಸ್ಪತ್ರೆಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಆ) ಕೋಲಾರ ಜಿಲ್ಲೆಯಲ್ಲಿ ಯಾವ ಯಾವ ಸ್ಥಳಗಳಲ್ಲಿ ಸ್ಥಾಪಿಸುವ ಉದ್ದೇಶ ವಿದೆ?

ಇ) ರಾಷ್ಟ್ರೀಯ ಹೆದ್ದಾರಿ–4 ಕೋಲಾರ ತಾಲ್ಲೂಕು ನರಸಾಪುರದ ಮೂಲಕ ಹಾದುಹೋಗುತ್ತಿದ್ದು ಈ ಭಾಗದಲ್ಲಿ ಒಂದು ಆಸ್ಪತ್ರೆಯನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೆದ್ದಾರಿಗೆ ಹತ್ತಿರದಲ್ಲಿರುವ 275 ಸಮುದಾಯ ಆರೋಗ್ಯ ಕೇಂದ್ರಗಳನ್ನು ಹಾಗೂ ಇತರೆ 44 ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಆಸ್ಪತ್ರೆಗಳನ್ನು ಗುರುತಿಸಿದ್ದು ಇಲ್ಲಿ ತುರ್ತು ಅಪಘಾತ ಚಿಕಿತ್ಸಾ ಕೇಂದ್ರಗಳನ್ನು ತೆರೆಯಲು 12ನೇ ಹಣಕಾಸು ಯೋಜನೆ ಅಡಿಯಲ್ಲಿ ಯೋಜಿಸಲಾಗಿದೆ